**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 152 ಜಿಪಅ 2016

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 20.10.2016

## ಅಧಿಸೂಚನೆ

ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ 1978 (1990ರ ಕರ್ನಾಟಕ ಅಧಿನಿಯಮ (14)ರ ಪ್ರಕರಣ 8ರ ಸಹವಾಚನದೊಂದಿಗೆ 3ನೇ ಪ್ರಕರಣದ (1)ನೇ ಉಪ ಪ್ರಕರಣದಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಸದರಿ ಅಧಿನಿಯಮದ 3ನೇ ಪ್ರಕರಣದ (2)ನೇ ಉಪ ಪ್ರಕರಣದ ಖಂಡ (ಎ)ರಲ್ಲಿ ಅಗತ್ಯಪಡಿಸಲಾದಂತೆ, ಕರ್ನಾಟಕ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ (ಸಹಾಯಕ ಇಂಜಿನಿಯರ್‌ಗಳು ಮತ್ತು ಕಿರಿಯ ಇಂಜಿನಿಯರ್‌ಗಳ ವೃಂದಗಳಿಗೆ ನೇಮಕಾತಿ) (ವಿಶೇಷ) ನಿಯಮಗಳು, 2014ಕ್ಕೆ ತಿದ್ದುಪಡಿ ಮಾಡಲು ಕರ್ನಾಟಕ ಸರ್ಕಾರವು ಪ್ರಸ್ತಾವಿಸಿದ್ದು, ಇದರಿಂದ ಬಾಧಿತರಾಗಬಹುದಾದಂತಹ ಎಲ್ಲಾ ವ್ಯಕ್ತಿಗಳ ಮಾಹಿತಿಗಾಗಿ ಕರಡನ್ನು ಈ ಮೂಲಕ ಪ್ರಕಟಿಸಲಾಗಿದೆ ಹಾಗೂ ಸದರಿ ಕರಡು ನಿಯಮಗಳನ್ನು ಅಧಿಕೃತ ರಾಜ್ಯ ಪತ್ರದಲ್ಲಿ ಪ್ರಕಟವಾದ 15 ದಿನಗಳ ಅವಧಿಯ ನಂತರ, ಪರಿಗಣನೆಗೆ ತೆಗೆದುಕೊಳ್ಳಲಾಗುವುದೆಂದು ಈ ಮೂಲಕ ತಿಳಿಸಿದೆ.

ಸದರಿ ಕರಡು ನಿಯಮಗಳ ಬಗ್ಗೆ ರಾಜ್ಯ ಸರ್ಕಾರವು ಯಾವುದೇ ವ್ಯಕ್ತಿಯಿಂದ ಆಕ್ಷೇಪಣೆ ಅಥವಾ ಸಲಹೆಗಳನ್ನು ಮೇಲೆ ನಿಗದಿಪಡಿಸಿದ ಅವಧಿಯೊಳಗೆ ಸ್ವೀಕರಿಸಿದಲ್ಲಿ ಅವುಗಳನ್ನು ರಾಜ್ಯ ಸರ್ಕಾರವು ಪರಿಗಣಿಸುವುದು. ಆಕ್ಷೇಪಣೆಗಳು ಹಾಗೂ ಸಲಹೆಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಡಾಃ ಅಂಬೇಡ್ಕರ್ ವೀಧಿ, ಬೆಂಗಳೂರು-560001, ಈ ವಿಳಾಸಕ್ಕೆ ಕಳುಹಿಸಬಹುದಾಗಿದೆ.

## ಕರಡು ನಿಯಮಗಳು

1. **ಶೀರ್ಷಿಕೆ ಮತ್ತು ಪ್ರಾರಂಭ:-** (1) ಈ ನಿಯಮಗಳನ್ನು ಕರ್ನಾಟಕ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ (ಸಹಾಯಕ ಇಂಜಿನಿಯರ್‌ಗಳು ಮತ್ತು ಕಿರಿಯ ಇಂಜಿನಿಯರ್‌ಗಳ ವೃಂದಗಳಿಗೆ ನೇಮಕಾತಿ) (ವಿಶೇಷ) (ತಿದ್ದುಪಡಿ) ನಿಯಮಗಳು, 2016 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ದಿನಾಂಕ: 01.12.2014 ರಿಂದಲೇ ಪೂರ್ವಾನ್ವಯವಾಗುವಂತೆ ಜಾರಿಗೆ ಬರುತ್ತವೆ.

2. **ನಿಯಮ 6 ಕ್ಕೆ ತಿದ್ದುಪಡಿ:-** ಕರ್ನಾಟಕ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ (ಸಹಾಯಕ ಇಂಜಿನಿಯರ್‌ಗಳು ಮತ್ತು ಕಿರಿಯ ಇಂಜಿನಿಯರ್‌ಗಳ ವೃಂದಗಳಿಗೆ ನೇಮಕಾತಿ) (ವಿಶೇಷ) ನಿಯಮಗಳು, 2014ರ ನಿಯಮ 6, ಉಪ ನಿಯಮ 6ರಲ್ಲಿ ಇರುವ "ಆರು ತಿಂಗಳು"

ಎಂಬ ಶಬ್ದಗಳಿಗೆ ಬದಲಾಗಿ "ಇಪ್ಪತ್ತು ತಿಂಗಳು" ಎಂಬ ಶಬ್ದಗಳನ್ನು ನಿಯಮಗಳು ಜಾರಿಗೆ ಬಂದ ದಿನಾಂಕದಿಂದ ಸೇರಿಸಲ್ಪಟ್ಟಿದೆ ಎಂದು ಭಾವಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಸಿದ್ದೇಶ್ ಪೊತಲಕಟ್ಟಿ)**
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:-**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಈ ಅಧಿಸೂಚನೆಯನ್ನು ದಿನಾಂಕ: 21.10.2016ರ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ, ಇದರ 100 ಪ್ರತಿಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಕಳುಹಿಸುವಂತೆ ಕೋರಿದೆ.

**ಪ್ರತಿ:**

1) ಸರ್ಕಾರದ ಪ್ರಧಾನ ಕಾರ್ಯದರ್ಶಿ / ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
2) ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
3) ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ
4) ಮುಖ್ಯ ಇಂಜಿನಿಯರ್ ಸಂಪರ್ಕ ಮತ್ತು ಕಟ್ಟಡಗಳು, (ದಕ್ಷಿಣ), ಲೋಕೋಪಯೋಗಿ ಇಲಾಖೆ, ಕೆ.ಆರ್.ವೃತ್ತ, ಬೆಂಗಳೂರು.
5) ಸಿಸ್ಟಮ್ ಮ್ಯಾನೇಜರ್, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ- ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
6) ಶಾಖಾ ರಕ್ಷಾಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ:**

1) ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ /ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3) ಸಚಿವ ಸಂಪುಟ ಶಾಖೆ (ಉಲ್ಲೇಖ: ಸಚಿವ ಸಂಪುಟದ ವಿಷಯ ಸಂಖ್ಯೆ: ಸಿ 512/2016 ದಿನಾಂಕ: 18.10.2016)
4) ಸರ್ಕಾರದ ಜಂಟಿ ಕಾರ್ಯದರ್ಶಿ (ಆಡಳಿತ) / ಜಂಟಿ ಕಾರ್ಯದರ್ಶಿ (ಆಡಳಿತ-2), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.